ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 24/9/19

# ಅ.1ರಂದು ಮೇಯರ್ ಚುನಾವಣೆ

## 12 ಸ್ಥಾಯಿ ಸಮಿತಿಗಳಿಗೂ ಅಂದೇ ಸದಸ್ಯರ ಆಯ್ಕೆ | 27ಕ್ಕೆ ನಡೆಯಬೇಕಿತ್ತು

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು 24-9-19

ಬಿಬಿಎಂಪಿ ಮೇಯರ್ ಮತ್ತು ಉಪ ಮೇಯರ್ ಸ್ಥಾನಕ್ಕೆ ಸೆ.27ರಂದು ನಿಗದಿಯಾಗಿದ್ದ ಚುನಾವಣೆಯನ್ನು ಅ.1ಕ್ಕೆ ಮುಂದೂಡಲಾಗಿದೆ. ಈ ಚುನಾವಣೆ ಜತೆಯಲ್ಲೇ 12 ಸ್ಥಾಯಿ ಸಮಿತಿಗಳ ಸದಸ್ಯರ ಆಯ್ಕೆ ಪ್ರಕ್ರಿಯೂ ನಡೆಯಲಿದೆ.

ನಿಯಮಗಳ ಪ್ರಕಾರ ಮೇಯರ್ ಮತ್ತು ಉಪ ಮೇಯರ್ ಚುನಾವಣೆ ಜತೆಗೆ ಸ್ಥಾಯಿ ಸಮಿತಿ ಅಧ್ಯಕ್ಷರು ಹಾಗೂ ಸದಸ್ಯರ ಚುನಾವಣೆ ನಡೆಯಬೇಕು ಎಂದು ಪಾಲಿಕೆಯ ವಿರೋಧ ಪಕ್ಷದ ನಾಯಕ ಪದ್ಮನಾಭರೆಡ್ಡಿ ಮನವಿ ಸಲ್ಲಿಸಿದ್ದರು. ಮೇಯರ್, ಉಪ ಮೇಯರ್, ಸ್ಥಾಯಿ ಸಮಿತಿ ಚುನಾವಣೆಯಿಂದ ಉಪ ಚುನಾವಣೆ ಮೇಲೆ ಪರಿಣಾಮ ಬೀರಲಿದೆ. ಅಲ್ಲದೆ, ಒಂದು ವರ್ಷ ನಿಗದಿಯಾಗಿರುವ ಸ್ಥಾಯಿ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರ ಅಧಿಕಾರದ ಅವಧಿ ಮುಕ್ತಾಯಗೊಳ್ಳಲು ಡಿಸೆಂಬರ್ ವರೆಗೂ ಕಾಲಾವಕಾಶವಿದೆ. ಮೇಯರ್ ಚುನಾವಣೆ ಜತೆಗೆ ಸ್ಥಾಯಿ ಸಮಿತಿ ಆಯ್ಕೆ ಮಾಡಿದರೆ ಸದಸ್ಯರ ಹಕ್ಕು ಮೊಟಕುಗೊಳ್ಳಲಿದೆ ಎಂದು ಆಡಳಿತ ಪಕ್ಷದ ನಾಯಕ ಅಬ್ದುಲ್ ವಾಜಿದ್ ಹೇಳಿದ್ದರು.

ಈ ಅಂಶಗಳನ್ನು ಪರಿಗಣಿಸಿದ ಪ್ರಾದೇಶಿಕ ಆಯುಕ್ತ ಹರ್ಷಗುಪ್ತ, ರಾಜ್ಯ ಚುನಾವಣಾ ಆಯೋಗಕ್ಕೆ ಸ್ಪಷ್ಟನೆ ಕೋರಿದ್ದರು. ಇದೀಗ ಅ.1ರಂದು ಮೇಯರ್ ಚುನಾವಣೆ ಜತೆಗೆ ಸ್ಥಾಯಿ ಸಮಿತಿ ಸದಸ್ಯರ ಚುನಾವಣೆಯೂ ನಡೆಯಲಿದೆ.



### ಒಟ್ಟಿಗೆ ಚುನಾವಣೆ ನಡೆಸಲು ಪತ್ರ

**ಕರ್ನಾಟಕ ಮುನ್ಸಿಪಲ್ ಕಾಯ್ದೆ 1976ರ ನಿಯಮ 11(5-ಎ) ಅನ್ವಯ ಮೇಯರ್ ಮತ್ತು ಉಪಮೇಯರ್ ಸ್ಥಾನಗಳಿಗೆ ಚುನಾವಣೆ ನಡೆಯುವ ದಿನದಂದು 12 ಸ್ಥಾಯಿ ಸಮಿತಿ ಸದಸ್ಯರ ಸ್ಥಾನಗಳಿಗೆ ಚುನಾವಣೆ ನಡೆಸಿದರೆ ಯಾವುದೇ ತೊಂದರೆ ಇಲ್ಲ ಎಂದು ಪ್ರಾದೇಶಿಕ ಆಯುಕ್ತ ಹರ್ಷ ಗುಪ್ತ ಅವರಿಗೆ ಸರ್ಕಾರದ ಅಧೀನ ಕಾರ್ಯದರ್ಶಿ ಎ. ವಿಜಯ್‌ಕುಮಾರ್ ಪತ್ರದ ಮೂಲಕ ತಿಳಿಸಿದ್ದಾರೆ.**

## ಮಹಾಪೌರ ಅಭ್ಯರ್ಥಿ ಆಯ್ಕೆಗೆ ಸಮಿತಿ

**ಬೆಂಗಳೂರು:** ಬಿಜೆಪಿಯಲ್ಲಿ ಬಿಬಿಎಂಪಿ ಮೇಯರ್ ಮತ್ತು ಉಪ ಮೇಯರ್ ಅಭ್ಯರ್ಥಿ ಆಯ್ಕೆ ಕಗ್ಗಂಟಾಗಿರುವ ಹಿನ್ನೆಲೆಯಲ್ಲಿ ಶಾಸಕ ಎಸ್. ರಘು ನೇತೃತ್ವದಲ್ಲಿ ಸಮಿತಿ ರಚಿಸಲಾಗಿದೆ.

ನಗರದ ಬಿಜೆಪಿ ಜನಪ್ರತಿನಿಧಿಗಳ ಜತೆ ಸಮಾಲೋಚನೆ ನಡೆಸಲಿರುವ ಸಮಿತಿ, ವರದಿ ತಯಾರಿಸಲಿದೆ. ವರದಿ ಬಂದ ಬಳಿಕ ಮುಖ್ಯಮಂತ್ರಿ ಬಿಎಸ್‌ವೈ ಮತ್ತೊಮ್ಮೆ ಸಭೆ ನಡೆಸಿ ಅಭ್ಯರ್ಥಿಗಳ ಆಯ್ಕೆ ಮಾಡಲಿದ್ದಾರೆ.



**» ಮುಖ್ಯಮಂತ್ರಿ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ರಚನೆ**

ಸಿಎಂ ರಾಜಕೀಯ ಕಾರ್ಯದರ್ಶಿ ಎಸ್. ಆರ್. ವಿಶ್ವನಾಥ್, ಶಾಸಕ ರವಿಸುಬ್ರಮಣ್ಯ, ರಾಜ್ಯ ಪ್ರಧಾನ ಕಾರ್ಯದರ್ಶಿ ರವಿಕುಮಾರ್ ಮತ್ತು ಪಕ್ಷದ ಜಿಲ್ಲಾಧ್ಯಕ್ಷ ಎಸ್. ಮುನಿರಾಜು ಸಮಿತಿಯಲ್ಲಿರಲಿದ್ದಾರೆ. ಈ ಸಮಿತಿಯು ಸಚಿವರ, ಸಂಸದರ, ಶಾಸಕರ, ವಿಧಾನಪರಿಷತ್ ಸದಸ್ಯರ ಮತ್ತು ಪಕ್ಷದ ಮುಖಂಡರ ಅಭಿಪ್ರಾಯ ಸಂಗ್ರಹಿಸಲಿದೆ. ಮೇಯರ್, ಉಪ ಮೇಯರ್ ಜತೆಗೆ ಆಡಳಿತ ಪಕ್ಷದ ನಾಯಕರು, ವಿವಿಧ ಸ್ಥಾಯಿ ಸಮಿತಿಗಳ ಅಧ್ಯಕ್ಷರ ಆಯ್ಕೆ ಕುರಿತೂ ಅಭಿಪ್ರಾಯ ಸಂಗ್ರಹಿಸಲಿದೆ.

ಸಿಎಂ ಗೃಹ ಕಚೇರಿ ಕೃಷ್ಣಾದಲ್ಲಿ ಸೋಮವಾರ ನಡೆದ ಸಭೆಯಲ್ಲಿ ಚುನಾವಣೆ ಕುರಿತು ವಿಸ್ತೃತ ಚರ್ಚೆಯಲ್ಲಿ ಬೆಂಗಳೂರಿನ ಶಾಸಕರು ಮತ್ತು ಸಂಸದರ ಅಭಿಪ್ರಾಯಗಳನ್ನು ಯಡಿಯೂರಪ್ಪ ಸಂಗ್ರಹಿಸಿದರು.

### ಕೈ ಮುಖಂಡರಿಂದಲೂ ತಯಾರಿ

**ಬೆಂಗಳೂರು: ಬಿಬಿಎಂಪಿ ಮೇಯರ್ ಚುನಾವಣೆ ಹಿನ್ನೆಲೆಯಲ್ಲಿ ಸೋಮವಾರ ಕೆಪಿಸಿಸಿ ಕಚೇರಿಯಲ್ಲಿ**



**ಪಕ್ಷದ ಪ್ರಮುಖ ನಾಯಕರ ಸಭೆ ನಡೆಯಿತು. ಬೆಂಗಳೂರಿನ ಪಕ್ಷದ ಶಾಸಕರು, ಪಾಲಿಕೆ ಸದಸ್ಯರ ಸಭೆ ನಡೆಸಿದ ಕೆಪಿಸಿಸಿ ಅಧ್ಯಕ್ಷ ದಿನೇಶ್ ಗುಂಡೂರಾವ್ ಅಭಿಪ್ರಾಯ ಸಂಗ್ರಹಿಸಿದರು. ಶಾಸಕರಾದ ರಾಮಲಿಂಗಾರೆಡ್ಡಿ, ಜಮೀರ್ ಅಹ್ಮದ್, ಸೌಮ್ಯಾ ರೆಡ್ಡಿ, ಅಖಂಡ ಶ್ರೀನಿವಾಸಮೂರ್ತಿ, ಬೈರತಿ ಸುರೇಶ್ ತಮ್ಮ ಅಭಿಪ್ರಾಯಗಳನ್ನು ತಿಳಿಸಿದರು. ಮೇಯರ್ ಆಯ್ಕೆಗೆ ಅಗತ್ಯ ಮತಗಳು ಇಲ್ಲದಿರುವುದರಿಂದ ಅಭ್ಯರ್ಥಿ ಹಾಕಬೇಕೇ, ಬೇಡವೇ ಎಂಬ ಬಗ್ಗೆ ಚರ್ಚೆ ನಡೆಯಿತು. ನಂತರ ಸುದ್ದಿಗಾರರಿಗೆ ಪ್ರತಿಕ್ರಿಯೆ ನೀಡಿದ ದಿನೇಶ್ ಗುಂಡೂರಾವ್, ನಾವು ಅಭ್ಯರ್ಥಿ ಹಾಕಲು ನಿರ್ಧರಿಸಿದ್ದೇವೆ. ಜತೆಗೆ ಗೆಲ್ಲುವ ವಿಶ್ವಾಸವಿದೆ ಎಂದು ತಿಳಿಸಿದರು.**

**5 ಹೆಸರು ಪ್ರಸ್ತಾಪ:** ಸಭೆಯಲ್ಲಿ ಪ್ರಮುಖವಾಗಿ ಹೆಸರುಗಳು ಮೇಯರ್ ಸ್ಥಾನಕ್ಕೆ ಪ್ರಸ್ತಾಪವಾಯಿತು ಉಮೇಶ್ ಶೆಟ್ಟಿ, ಪದ್ಮನಾಭರೆಡ್ಡಿ, ಎಲ್ ಶ್ರೀನಿವಾಸ್, ಗೌತಮ್, ಮಂಜುನಾಥ ರಾಜ ಹೆಸರುಗಳು ಸಭೆಯಲ್ಲಿ ಕೇಳಿಬಂದವು. ಅಂತಿಮವಾ ಸಿಎಂ ನಿರ್ಧಾರಕ್ಕೆ ಸಭೆ ಒಪ್ಪಿಗೆ ನೀಡಿತು. ವರ ಆಧಾರದ ಮೇಲೆ ಸಿಎಂ ಕೈಗೊಳ್ಳುವ ತೀರ್ಮಾನ ಬದ್ಧರಾಗಿರುತ್ತೇವೆ ಎಂದು ಬೆಂಗಳೂರು ಬಿಜೆ ಸಂಸದರು ಹಾಗೂ ಶಾಸಕರು ಒಪ್ಪಿಗೆ ಸೂಚಿಸಿದರು.